ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 452(529) |
| ಮಾನ್ಯ ಸದಸ್ಯರ ಹೆಸರು: | ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 09.03.2020 |
| ಉತ್ತರಿಸುವ ಸಚಿವರು: | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ ಜಿಲ್ಲೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ<br><br><u>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮಗಳು:-</u><br><br>ಪ್ರಸ್ತುತ ಇರುವ ವೈದ್ಯರುಗಳಿಂದ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.<br><br>1. ತಜ್ಞ ವೈದ್ಯರನ್ನು "On Call Basis" ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 178 ಹೆಚ್ಎಸ್ಹೆಚ್ 2011, ದಿನಾಂಕ: 20-05-2016ರಲ್ಲಿ ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.<br><br>2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್ಎಸ್ಹೆಚ್ 2015, ದಿನಾಂಕ:22-04-2016 ಹಾಗೂ ಆಕುಕ 359 ಹೆಚ್ಎಸ್ಹೆಚ್ 2016, ದಿನಾಂಕ:01-08-2016ರಲ್ಲಿ ಅನುಮತಿ ನೀಡಲಾಗಿದೆ.<br><br>3. ಎಂಬಿಬಿಎಸ್ ಪದವಿ ಹೊಂದಿದ ವೈದ್ಯ ಅಭ್ಯರ್ಥಿಗಳು ಲಭ್ಯವಿಲ್ಲದೆ ಇದ್ದ ಪಕ್ಷದಲ್ಲಿ ಸದರಿ ಹುದ್ದೆಯ ಎದುರು ಗುತ್ತಿಗೆ ಆಯುಷ್ ವೈದ್ಯರನ್ನು ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.<br><br>4. ಹಾಗೆಯೇ ಖಾಲಿ ಇರುವ ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ನಿಯಮ-2019ರ ಮೂಲಕ ಭರ್ತಿ ಮಾಡಲು ದಿನಾಂಕ: 06-02-2020ರ ಕರ್ನಾಟಕ ರಾಜ್ಯ ಪತ್ರದಲ್ಲಿ ಕರಡು ನಿಯಮಗಳನ್ನು ಪ್ರಕಟಿಸಿದ್ದು, ಅಂತಿಮ ನಿಯಮಗಳನ್ನು ಹೊರಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |

Scanned with CamScanner

| | | |
|---|---|---|
| ೮ | ಬೀದರ್ ಜಿಲ್ಲೆಯಲ್ಲಿ ಕಳೆದ ವರ್ಷ ಡೆಂಗ್ಯೂ, ಚಿಕನ್ ಗುನ್ಯ ಪ್ರಕರಣಗಳು ಅಧಿಕ ಸಂಖ್ಯೆಯಲ್ಲಿ ವರದಿಯಾಗಿದ್ದು, ಇದರಿಂದ ಸಾವನ್ನಪ್ಪಿದ ಪ್ರಕರಣಗಳು ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) | 2019ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ ಗುನ್ಯ ಜ್ವರದಿಂದ ಮರಣ ಸಂಭವಿಸಿದ ಯಾವುದೆ ಪ್ರಕರಣಗಳು ಇರುವುದಿಲ್ಲ |

ಸಂ: ಆಕುಕ 05 ಹೆಚ್ ಎಸ್ ಡಿ 2020

[ಬಿ. ಶ್ರೀರಾಮುಲು]
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

Scanned with CamScanner